**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 74 ಡಿಟಿಇ 2011

ಕರ್ನಾಟಕ ಸರ್ಕಾರದ ಸಚಿವಾಲಯ,
ಸಚಿವಾಲಯ-2, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:28-3-2011.

**ಸುತ್ತೋಲೆ**

ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಬೋಧಕ ಹಾಗೂ ಬೋಧಕೇತರ ವೃಂದಗಳಲ್ಲಿ ನೇಮಕಗೊಂಡವರುಗಳು ಸದರಿ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್‌ನಿಂದ ಇತರೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್ ಅಥವಾ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದಲ್ಲಿ ಮಂಜೂರಾದ ಹುದ್ದೆಯಲ್ಲದ ಸ್ಥಳಗಳಲ್ಲಿ ಅಥವಾ ಮಂಜೂರಾದ ಹುದ್ದೆಗಳ ಎದುರಿಗೆ ವರ್ಗಾವಣೆ / ನಿಯೋಜನೆ / ಅನ್ಯ ಕಾರ್ಯ ನಿಮಿತ್ತದ ಪ್ರಸ್ತಾವನೆಗಳಿಗೆ ಸರ್ಕಾರದ ಅನುಮತಿ ಪಡೆಯದೇ ತಾಂತ್ರಿಕ ಶಿಕ್ಷಣ ನಿರ್ದೇಶಕರು ಅವರ ಹಂತದಲ್ಲಿಯೇ ಅನುಮತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆದುದರಿಂದ ಇನ್ನು ಮುಂದೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್‌ಗಳಲ್ಲಿನ ಬೋಧಕ / ಬೋಧಕೇತರ ವೃಂದದವರುಗಳನ್ನು ತಾಂತ್ರಿಕ ಶಿಕ್ಷಣ ನಿರ್ದೇಶಕರು ಇತರೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್‌ಗಳಿಗೆ ನಿಯೋಜನೆ / ವರ್ಗಾವಣೆ ಮಾಡತಕ್ಕದ್ದಲ್ಲ. ಒಂದು ವೇಳೆ ಮಂಜೂರಾದ ಹುದ್ದೆಗಳ ಎದುರಿಗೆ ವರ್ಗಾವಣೆ / ನಿಯೋಜನೆ / ಅನ್ಯ ಕಾರ್ಯನಿಮಿತ್ತ ನೇಮಿಸಬೇಕಾದಲ್ಲಿ ಅಂತಹ ಪ್ರಸ್ತಾವನೆಗಳನ್ನು ಸೂಕ್ತ ಸಮರ್ಥನೀಯ ಕಾರಣಗಳೊಂದಿಗೆ ಸರ್ಕಾರಕ್ಕೆ ಸಲ್ಲಿಸಿ ಸರ್ಕಾರದ ಪೂರ್ವಾನುಮತಿಯನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ. ವರ್ಗಾವಣೆ / ನಿಯೋಜನೆಗೊಳ್ಳುವ ಬೋಧಕ / ಬೋಧಕೇತರ ವೃಂದದವರುಗಳು ಕಾರ್ಯವರದಿ ಮಾಡುವ ಸಂದರ್ಭದಲ್ಲಿ ಈ ನಿಯೋಜನೆ / ವರ್ಗಾವಣೆಗೆ ಸರ್ಕಾರದಿಂದ ಅನುಮೋದನೆ ಪಡೆದಿರುವುದನ್ನು ಸಂಬಂಧಪಟ್ಟ ಸಂಸ್ಥೆಯ ಪ್ರಾಂಶುಪಾಲರುಗಳು ಖಚಿತಪಡಿಸಿಕೊಳ್ಳತಕ್ಕದ್ದು. ಇಲ್ಲವಾದಲ್ಲಿ ಸಂಬಂಧಪಟ್ಟ ಸಂಸ್ಥೆಯ ಪ್ರಾಂಶುಪಾಲರುಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಮುಂದುವರೆದು ಈಗಾಗಲೇ ಸರ್ಕಾರದ ಅನುಮತಿ ಪಡೆಯದೇ ನಿಯೋಜಿಸಿರುವ ಎಲ್ಲಾ ಪ್ರಕರಣಗಳನ್ನು ರದ್ದುಪಡಿಸಿದೆ.

(ಎಂ.ಮದನ್ ಗೋಪಾಲ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ).

**ಗೆ:**

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
2. ಸಂಬಂಧಪಟ್ಟ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)
3. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ